# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್:40:2022-23 ದಿನಾಂಕ:04.06.2022

## ಬಾಗಲಗುಂಟೆ ವಾರ್ಡ್-14 ಸಮಿತಿ ಸಭೆಯ ನಡವಳಿಗಳು

ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)/ಪಿಆರ್/35/2020-21, ದಿ.16.04.2021ರ ಆದೇಶದಂತೆ ದಿ.04.06.2022 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ.14ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

ಸಭೆಗೆ ಹಾಜರಾಗಿದ್ದವರ ವಿವರಗಳು:-

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ.ಮರುಳಸಿದ್ದಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು |
| 2 | ಶ್ರೀ.ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.14, ಬಾಗಲಗುಂಟೆ |
| 3 | ಶ್ರೀ.ತನಯ್ ಕುಮಾರ್ ಎ | ಸಹಾಯಕ ಅಭಿಯಂತರರು |
| 4 | ಶ್ರೀ.ರೇಖಾ ಜೆ | ಮೆಡಿಕಲ್ ಆಫಿಸರ್, ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ |
| 5 | ಶ್ರೀ.ಮೋಹನ್ ಗೌರೋಜಿ | ಹಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ.ಮೃತ್ಯುಂಜಯ | J.M.H.A. ಬಾಗಲಗುಂಟೆ ವಾರ್ಡ್ 14 |
| 7 | ಶ್ರೀ.ಸದಾಶಿವ | ಎಂ.ಇ.ಐ ಬಡಾವಣೆ ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು |
| 8 | ಶ್ರೀ.ಬಿ.ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ |
| 9 | ಶ್ರೀ.ವೆಂಕಟರಮಣ ಹೊಳ್ಳ | ರಾಯಲ್ ಎನ್‌ಕ್ಲೇವ್, ವಾರ್ಡ್ ಸಮಿತಿ ಸದಸ್ಯರು |
| 10 | ಶ್ರೀ.ಹನುಮಂತರಾಯಪ್ಪ | ನಾಗರೀಕ ಹಿತ ರಕ್ಷಣಾ ಸಮಿತಿ , ಹಾವನೂರು ಬಡಾವಣೆ |

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆದ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

- **ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

➢ ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿನ ಹಲವು ಬಡಾವಣೆಗಳಲ್ಲಿ ನೀರು ಸರಬರಾಜು ವ್ಯತ್ಯಯವಾಗಿರುವುದರಿಂದ ನೀರಿನ ಅಭಾವ ಉಂಟಾಗಿರುತ್ತದೆ. ಆದುದರಿಂದ ಹೆಚ್ಚಿನ ನೀರು ಸರಬರಾಜು ವ್ಯವಸ್ಥೆಯನ್ನು ಮಾಡಲು ಸಹಾಯಕ ಅಭಿಯಂತರರನ್ನು ವಾರ್ಡ್ ಕಮಿಟಿ ಸದಸ್ಯರು ಕೋರಿದರು.

➢ ವಾರ್ಡ್ ವ್ಯಾಪ್ತಿಯಲ್ಲಿ ನೀರು ಸರಬರಾಜುದಾರರು ಸಮರ್ಪಕವಾಗಿ ಕಾರ್ಯ ನಿರ್ವಹಿಸದಿರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಸೂಚಿಸಿದರು.

Scanned with CamScanner

➢ ಒಳಚರಂಡಿ ವ್ಯವಸ್ಥೆಗಾಗಿ ಪೈಪ್‌ಲೈನ್ ಅಳವಡಿಸಲು ರಸ್ತೆಯನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕತ್ತರಿಸಿರುವುದು ಕಂಡುಬಂದಿರುತ್ತದೆ. ಸದರಿ ವಿಷಯಗಳ ದುರಸ್ಥಿ ಕಾರ್ಯವನ್ನು ತುರ್ತಾಗಿ ನಿರ್ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಸಹಾಯಕ ಅಭಿಯಂತರರಾದ ಆದರ್ಶ್ ಕೆ ಮತ್ತು ಡಿ.ಮಂಜುನಾಥ್ ವಾಟರ್ ಇನ್ಸ್‌ಪೆಕ್ಟರ್ ರವರಿಗೆ ಸೂಚಿಸಲಾಯಿತು.

ಕ್ರಮ: ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ

- <u>ಬೆಸ್ಕಾಂಗೆ ಸಂಬಂಧಪಟ್ಟ ವಿಷಯದ ಬಗ್ಗೆ.</u>

➢ ಬೆಸ್ಕಾಂ ಇಲಾಖೆಯಿಂದ ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆಗಳಲ್ಲಿ ಅಗೆದಿರುವ ಗುಂಡಿಗಳನ್ನು ತುರ್ತಾಗಿ ದುರಸ್ಥಿಪಡಿಸಲು ಬೆಸ್ಕಾಂ ಸಹಾಯಕ ಅಭಿಯಂತರರನ್ನು ಕೋರಿದರು. ಸದರಿ ವಿಷಯದ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ರವರು ಮಾತನಾಡಿ ಇನ್ನೂ 15-20 ದಿನಗಳ ಒಳಗಾಗಿ ದುರಸ್ಥಿ ಕಾರ್ಯವನ್ನು ಪೂರ್ಣಗೊಳಿಸುವುದಾಗಿ ವಾರ್ಡ್ ಸಮಿತಿ ಸದಸ್ಯರಿಗೆ ತಿಳಿಸಿದರು.

➢ ಕರ್ನಾಟಕ ಬ್ಯಾಂಕ್ ಹಿಂಬಾಗ ಎರಡು ಕಂಬಗಳು ಬಾಗಿದ್ದು, ಕೂಡಲೇ ಸರಿಪಡಿಸುವಂತೆ ವಾರ್ಡ್ ಕಮಿಟಿ ಸದಸ್ಯರಾದ ಕೃಷ್ಣಮೂರ್ತಿ ರವರು ಸೂಚಿಸಿದರು. ಹಾಗೂ ಕರೆಕಲ್ಲು ರಸ್ತೆಯಲ್ಲಿ ಒಂದು ಕಂಬ ಬಾಗಿದ್ದು, ಅದನ್ನು ಸರಿಪಡಿಸುವಂತೆ ವಾರ್ಡ್ ಕಮಿಟಿ ಸದಸ್ಯರಾದ ಸದಾಶಿವ ರವರು ಸೂಚಿಸಿದರು.

➢ ಹೊಸ ಎಲ್.ಇ.ಡಿ ಬಲ್ಬ್‌ಗಳನ್ನು ಖಾಲಿ ಇರುವ ಕಂಬಗಳಿಗೆ ಹಾಕಬೇಕು ಎಂದು ವಾರ್ಡ್ ಕಮಿಟಿ ಸದಸ್ಯರು ಕೋರಿದರು. ಸದರಿ ವಿಷಯಗಳ ಬಗ್ಗೆ ತುರ್ತು ಕ್ರಮವಹಿಸಲು ಸಂಬಂಧಪಟ್ಟ ಬೆಸ್ಕಾಂ ಇಲಾಖೆಯವರಿಗೆ ಸೂಚಿಸಲಾಯಿತು.

ಕ್ರಮ:ಬೆಸ್ಕಾಂ ಇಲಾಖೆ, ವಾ-14/ಸದಸ್ಯ ಕಾರ್ಯದರ್ಶಿ

- <u>ಘನತ್ಯಾಜ್ಯ ನಿರ್ವಹಣೆ ಬಗ್ಗೆ.</u>

ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಘನತ್ಯಾಜ್ಯ ವಿಲೇವಾರಿ ಮಾಡಲು ಕ್ರಮವಹಿಸುತ್ತಿರುವುದಾಗಿ ಸಭೆಗೆ ತಿಳಿಸಿದರು. 35 ಆಟೋಗಳು 35 ಬ್ಲಾಕ್‌ಗಳಲ್ಲಿ ಸಮರ್ಪಕವಾಗಿಕಾರ್ಯ ನಿರ್ವಹಿಸುತ್ತಿರುವುದಾಗಿ ತಿಳಿಸಿದರು ಹಾಗೂ ಸಂಬಂಧಿಸಿದ ಗುತ್ತಿಗೆದಾರರು ಹಾಗೂ ಮೇಲ್ವಿಚಾರಕರುಗಳು ಹಾಜರಿದ್ದು, ಘನತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು ಸೂಚಿಸಲಾಯಿತು.

ಕ್ರಮ:ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು

- <u>ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ.</u>

ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಂಬಂಧಿಸಿದಂತೆ, ಆರೋಗ್ಯ ಪರಿವೀಕ್ಷಕರು ಈ ಕೆಳಕಂಡಂತೆ ಮಾಹಿತಿ ಒದಗಿಸಿದರು.

| | |
|---|---|
| ಒಟ್ಟು ಪ್ರಕರಣಗಳು | 9099 |
| ಬಿಡುಗಡೆಯಾದ ಪ್ರಕರಣಗಳು | 8938 |
| ಸಕ್ರಿಯ ಪ್ರಕರಣಗಳು | 0 |
| ಮರಣ | 161 |

ಇರುತ್ತದೆಂದು ಹಾಗೂ ಸಧ್ಯದ ಪರಿಸ್ಥಿತಿಯಲ್ಲಿ 12 ರಿಂದ 14 ವರ್ಷದ ವಯಸ್ಸಿನ ಲಸಿಕೆ ಹಾಕುವ ಕಾರ್ಯಕ್ರಮ ನಡೆಯುತ್ತಿದ್ದು, ಶೇ.67% ಲಸಿಕೆಯನ್ನು ನೀಡಲಾಗಿದೆ ಮತ್ತು 15-18 ವಯಸ್ಸಿನವರಿಗೆ 90% ಹಾಗೂ ಬೂಸ್ಟರ್ ಡೋಸ್ 90% (60 ವಯಸ್ಸಿನ ಮೇಲ್ಪಟ್ಟವರಿಗೆ) ನೀಡಲಾಗಿದೆ ಎಂದು ಡಾ॥ಚಂದನ ರವರು ತಿಳಿಸಿದರು. ಹಾಗೂ ಪಾಲಕರು ಮಕ್ಕಳನ್ನು ಆಸ್ಪತ್ರೆಯ ಹತ್ತಿರ ಕರೆ ತಂದು ಲಸಿಕೆ ಹಾಕಿಸಲು ವಾರ್ಡ್‌ನ ನಿವಾಸಿಗಳಿಗೆ ತಿಳಿಸಲು ವಾರ್ಡ್ ಸಮಿತಿ ಸದಸ್ಯರಿಗೆ ಕೋರಲಾಯಿತು.

ಕ್ರಮ: ಕೋವಿಡ್ ಆರೋಗ್ಯ ವೈದ್ಯಾಧಿಕಾರಿಗಳು/ ಹಿರಿಯ ಆರೋಗ್ಯ ಪರಿವೀಕ್ಷಕರು

Scanned with CamScanner

- ಇತರೆ ವಿಷಯಗಳ ಬಗ್ಗೆ.

  - ರಾಜಕಾಲುವೆಯಲ್ಲಿ ತುಂಬಿರುವ ಹೂಳನ್ನು ತೆಗೆದಿಲ್ಲ ಎಂದು ವಾರ್ಡ್ ಕಮಿಟಿ ಸದಸ್ಯರುಗಳು ದೂರಿದರು. ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.
  - ವಾರ್ಡ್ ವ್ಯಾಪ್ತಿಯಲ್ಲಿನ ಹಲವಾರು ಬಡಾವಣೆಗಳ ರಸ್ತೆಗಳಲ್ಲಿ ಡಾಂಬರೀಕರಣ ಕಾಮಗಾರಿಯು ಬಹುತೇಕ ಮುಗಿದಿದ್ದು, ಇನ್ನುಳಿದ ರಸ್ತೆಗಳಲ್ಲಿ ಡಾಂಬರೀಕರಣ ಕಾಮಗಾರಿಯು ಪ್ರಗತಿಯಲ್ಲಿರುವುದಾಗಿ ವಾರ್ಡ್ ಅಭಿಯಂತರರು ತಿಳಿಸಿದರು.

ಕ್ರಮ:ಸ.ಅ ವಾ.14/ ಸ.ಕಾ.ನಿ.ಅ (ದಾಸರಹಳ್ಳಿ ಉಪ-ವಿಭಾಗ)
ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ

ಸಹಾಯಕ ಅಭಿಯಂತರರು
ಹಾಗೂ ಸದಸ್ಯ ಕಾರ್ಯದರ್ಶಿ ವಾರ್ಡ್ ಸಮಿತಿ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಅಧಿಕಾರಿಗಳ ಮಾಹಿತಿಗಾಗಿ:-</u>

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
9) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಲ್ಯಾಣಾಧಿಕಾರಿಗಳು (ದಾವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14) ಕಛೇರಿ ಪ್ರತಿ.

Scanned with CamScanner